**ಕರ್ನಾಟಕ ಸರ್ಕಾರ**

ಸಂ: ಗ್ರಾಅಪ 110 ಸೇಶಿಕಾ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:23.06.2018

**ಸುತ್ತೋಲೆ**

ವಿಷಯ: ಕೆ.ಸಿ.ಎಸ್.ಆರ್. ನಿಯಮ 68 ರ ಅನುಸಾರ ಹೆಚ್ಚುವರಿ ಪ್ರಭಾರ ವ್ಯವಸ್ಥೆ ಮಾಡುವ ಬಗ್ಗೆ.

ಉಲ್ಲೇಖ: ಸುತ್ತೋಲೆ ಸಂಖ್ಯೆ: ಎಫ್‌ಡಿ 10 ಎಸ್‌ಆರ್‌ಎಸ್ 91, ದಿ:08.10.1992

****

ವಿವಿಧ ಕಾರಣಗಳಿಗಾಗಿ ಖಾಲಿಯಾಗುವ ಹುದ್ದೆಗಳ ಕರ್ತವ್ಯಗಳನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 68 ರ ಅನುಸಾರ ತತ್ಸಮಾನ ಅಥವಾ ಅದಕ್ಕಿಂತ ಕಡಿಮೆ ದರ್ಜೆಯ ಅಧಿಕಾರಿ / ನೌಕರರನ್ನು ಹೆಚ್ಚುವರಿ ಪ್ರಭಾರದಲ್ಲಿ ಇರಿಸುವ ಮೂಲಕ ನಿರ್ವಹಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಈ ರೀತಿ ತನ್ನ ಕರ್ತವ್ಯಗಳ ಜೊತೆಗೆ ಇನ್ನೊಂದು ಹುದ್ದೆಯ ಪ್ರಭಾರದಲ್ಲಿ ಚಾಲ್ತಿ ಕರ್ತವ್ಯಗಳನ್ನು ನಿರ್ವಹಿಸಬೇಕಾದರೆ ***"ಆ ಹುದ್ದೆಗೆ ಅನ್ವಯಿಸುವ ವರ್ಗ, ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಸ್ಥಾನಪನ್ನವಾಗುವುದಕ್ಕೆ / ಬಡ್ತಿ ಹೊಂದಲು ಅರ್ಹನಾಗಿದ್ದರೆ ಅಥವಾ ತತ್ಸಮಾನವಾದ ಅಥವಾ ಅದಕ್ಕಿಂತ ಉನ್ನತ ಹುದ್ದೆಯನ್ನು ಹೊಂದಿದ್ದರೆ ಮಾತ್ರ ಹೆಚ್ಚುವರಿ ಪ್ರಭಾರದಲ್ಲಿ ಇರಿಸಬಹುದು"*** ಎಂದು ಆರ್ಥಿಕ ಇಲಾಖೆಯು ಉಲ್ಲೇಖದ ಸುತ್ತೋಲೆಯಲ್ಲಿ ಸ್ಪಷ್ಟ ನಿರ್ದೇಶನಗಳನ್ನು ನೀಡಿರುತ್ತದೆ.

ಆದರೆ ಕೆಲವೊಂದು ಪ್ರಕರಣಗಳಲ್ಲಿ ಮೇಲೆ ತಿಳಿಸಿರುವ ಆರ್ಥಿಕ ಇಲಾಖೆಯ ಸುತ್ತೋಲೆಯನ್ನು ಉಲ್ಲಂಘಿಸಿ ಅನಾರ್ಹ ಅಧಿಕಾರಿ / ನೌಕರರನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಉದಾಹರಣೆಗೆ ಡಿಪ್ಲೋಮ ವಿದ್ಯಾರ್ಹತೆ ಹೊಂದಿರುವ ಸಹಾಯಕ ಕಾರ್ಯಪಾಲಕ ಇಂಜಿನಿಯರುಗಳಿಗೆ ಕಾರ್ಯಪಾಲಕ ಇಂಜಿನಿಯರ್ ವೃಂದಕ್ಕೆ ಮುಂಬಡ್ತಿಯನ್ನು ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಹಾಗಾಗಿ ಸದರಿಯವರುಗಳನ್ನು ಕಾರ್ಯಪಾಲಕ ಇಂಜಿನಿಯರ್

ಹುದ್ದೆಯ ಹೆಚ್ಚುವರಿ ಪ್ರಭಾರದಲ್ಲಿ ಇರಿಸಲು ಮೇಲೆ ತಿಳಿಸಿರುವ ಸುತ್ತೋಲೆಯ ಅನುಸಾರ ಅವಕಾಶವಿರುವುದಿಲ್ಲ.

ಆದ್ದರಿಂದ, ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಹೆಚ್ಚುವರಿ ಪ್ರಭಾರದಲ್ಲಿರಿಸುವ ಅಧಿಕಾರಿ / ನೌಕರರು ಹೆಚ್ಚುವರಿ ಪ್ರಭಾರದಲ್ಲಿರಿಸುವ ಹುದ್ದೆಗೆ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಸ್ಥಾನಪನ್ನರಾಗುವುದಕ್ಕೆ / ಬಡ್ತಿ ಹೊಂದಲು ಅರ್ಹನಾಗಿದ್ದರೆ ಮಾತ್ರ ಅಥವಾ ತತ್ಸಮಾನವಾದ ಅಥವಾ ಅದಕ್ಕಿಂತ ಉನ್ನತ ಹುದ್ದೆಯನ್ನು ಹೊಂದಿದ್ದರೆ ಮಾತ್ರ ಕೆ.ಸಿ.ಎಸ್.ಆರ್. ನಿಯಮ 68 ರ ಪ್ರಕಾರ ಹೆಚ್ಚುವರಿ ಪ್ರಭಾರದಲ್ಲಿ ಇರಿಸಲು ಈ ಮೂಲಕ ಸ್ಪಷ್ಟಪಡಿಸಿದೆ.

(ಡಾ: ಎನ್.ನಾಗಾಂಬಿಕಾದೇವಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

**ಇವರಿಗೆ:**

1. ಆಯುಕ್ತರು, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ಸಂಸ್ಥೆ, ಆನಂದರಾವ್ ಸರ್ಕಲ್, ಬೆಂಗಳೂರು
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
4. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು
6. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
7. ನಿರ್ದೇಶಕರು (ಪಂಚಾಯತ್ ರಾಜ್ – 1&2), ಗ್ರಾ.ಅ.ಪಂ.ರಾಜ್ ಇಲಾಖೆ
8. ನಿರ್ದೇಶಕರು, ಸುಗ್ರಾಯೋ, ಗ್ರಾ.ಅ.ಪಂ.ರಾಜ್ ಇಲಾಖೆ
9. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ 2) / (ಆಡಳಿತ-1), ಗ್ರಾ.ಅ.ಪಂ.ರಾಜ್ ಇಲಾಖೆ
10. ವ್ಯವಸ್ಥಾಪಕರು (ಗಣಕ ಕೇಂದ್ರ), ಗ್ರಾ.ಅ.ಪಂ.ರಾಜ್ ಇಲಾಖೆ (ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ)
11. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿ.